ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1092/2025</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶರಣ್ ಕುಮಾರ್ | ಪಿ.ಡಬ್ಲ್ಯೂ.2 |
| ತಂದೆಯ ಹೆಸರು | : | ಪಳಣಿ ಹ್ಯಾಂಡಿ | ಸಿ.ಡಬ್ಲ್ಯೂ.2 |
| ವಯಸ್ಸು | : | 36 ವರ್ಷ | |
| ವೃತ್ತಿ | : | ಕೂಲಿ ಕೆಲಸ | |
| ವಾಸ | : | ಅರಿಶಿಣಗುಪ್ಪೆ | |

<u>ದಿನಾಂಕಃ 10-11-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿ ಗೊತ್ತು. ಚಾಸಾ-3 ರವರ ಪರಿಚಯವಿದೆ. ನೋಟೀಸ್ ಅನ್ನು ಹಾಗೂ ಮಹಜರ್ ಅನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-3(ಬಿ) ಮತ್ತು ನಿಪಿ-4(ಬಿ) ಇರುತ್ತದೆ. ಈ ಕೇಸಿನ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ23.04.2025 ರಂದು ಸಂಜೆಃ08.25 ರಿಂದ 09.30 ರವರೆಗೆ ಘಟನಾ ಸ್ಥಳದಲ್ಲಿ ಪೊಲೀಸರು ನಿಪಿ-4 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಘಟನಾ ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-4(ಬಿ) ರಂತೆ ಸಹಿಯನ್ನು ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಈಗ ನನಗೆ ತೋರಿಸುತ್ತಿರುವ ಮು.ಮಾ.1 ಮತ್ತು 2 ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-5 ರಂತೆ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿಃ24.04.2025 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ 'ದಿಃ23.04.2025 ರಂದು ----- ಪುನಃ ನೋಡಿದರೆ ಗುರುತಿಸುತ್ತೇನೆ' ಎಂದು ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಚಾರ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

C.C.No.1092/2025
PW-2 CW-2

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್‌ಆರ್ಃ